**A**

**CCE RF**
**CCE RR**
**REVISED**

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು – 560 003**

**KARNATAKA SECONDARY EDUCATION EXAMINATION BOARD, MALLESWARAM, BANGALORE – 560 003**

**ಎಸ್.ಎಸ್.ಎಲ್.ಸಿ. ಪರೀಕ್ಷೆ, ಮಾರ್ಚ್ / ಏಪ್ರಿಲ್, 2020**

**S.S.L.C. EXAMINATION, MARCH / APRIL, 2020**

# ಮಾದರಿ ಉತ್ತರಗಳು

# MODEL ANSWERS

ದಿನಾಂಕ : 30. 03. 2020 ] **ಸಂಕೇತ ಸಂಖ್ಯೆ : 83-K (Chem.)**

Date : 30. 03. 2020 ] **CODE NO. : 83-K (Chem.)**

## ವಿಷಯ : ವಿಜ್ಞಾನ

## Subject : SCIENCE

**(ರಸಾಯನಶಾಸ್ತ್ರ / Chemistry)**

**(ಹೊಸ ಪಠ್ಯಕ್ರಮ / New Syllabus)**

**(ಶಾಲಾ ಅಭ್ಯರ್ಥಿ & ಪುನರಾವರ್ತಿತ ಶಾಲಾ ಅಭ್ಯರ್ಥಿ / Regular Fresh & Regular Repeater)**

**(ಕನ್ನಡ ಭಾಷಾಂತರ / Kannada Version)**

**[ ಗರಿಷ್ಠ ಅಂಕಗಳು : 80**

**[ Max. Marks : 80**

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| 2. | ಒಂದು ದ್ರಾವಣದ pH ಮೌಲ್ಯ ಹೆಚ್ಚಾದಂತೆ<br>(A) ಪ್ರತ್ಯಾಮ್ಲೀಯ ಲಕ್ಷಣ ಕಡಿಮೆಯಾಗುತ್ತದೆ ಮತ್ತು $OH^-$ ಅಯಾನುಗಳ ಸಂಖ್ಯೆ ಹೆಚ್ಚುತ್ತದೆ<br>(B) ಆಮ್ಲೀಯ ಲಕ್ಷಣ ಹೆಚ್ಚಾಗುತ್ತದೆ ಮತ್ತು $H^+$ ಅಯಾನುಗಳ ಸಂಖ್ಯೆ ಕಡಿಮೆಯಾಗುತ್ತದೆ<br>(C) ಪ್ರತ್ಯಾಮ್ಲೀಯ ಲಕ್ಷಣ ಹೆಚ್ಚಾಗುತ್ತದೆ ಮತ್ತು $OH^-$ ಅಯಾನುಗಳ ಸಂಖ್ಯೆ ಹೆಚ್ಚುತ್ತದೆ<br>(D) ಆಮ್ಲೀಯ ಲಕ್ಷಣ ಕಡಿಮೆಯಾಗುತ್ತದೆ ಮತ್ತು $H^+$ ಅಯಾನುಗಳ ಸಂಖ್ಯೆ ಹೆಚ್ಚಾಗುತ್ತದೆ<br>***ಉತ್ತರ :*** (C) ಪ್ರತ್ಯಾಮ್ಲೀಯ ಲಕ್ಷಣ ಹೆಚ್ಚಾಗುತ್ತದೆ ಮತ್ತು $OH^-$ ಅಯಾನುಗಳ ಸಂಖ್ಯೆ ಹೆಚ್ಚುತ್ತದೆ | 1 |

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| 6. | ಇವುಗಳಲ್ಲಿ ಪರ್ಯಾಪ್ತ ಹೈಡ್ರೋಕಾರ್ಬನ್‌ಗೆ ಒಂದು ಉದಾಹರಣೆ<br>(A) $C_2H_6$ (B) $C_3H_4$<br>(C) $C_2H_2$ (D) $C_2H_4$<br>***ಉತ್ತರ :*** (A) $C_2H_6$ | 1 |
| 8. | ಅನುರೂಪ ಶ್ರೇಣಿಯಲ್ಲಿರುವ ಮೂರು ಕಾರ್ಬನ್ ಸಂಯುಕ್ತಗಳ ಅಣುಸೂತ್ರಗಳು $C_2H_6$, $C_3H_8$, $C_4H_{10}$ ಆಗಿವೆ. ಈ ಸಂಯುಕ್ತಗಳಿಗೆ ಸೂಕ್ತವಾದ ಸಾಮಾನ್ಯ ಅಣುಸೂತ್ರ<br>(A) $C_nH_{2n}$ (B) $C_nH_{2n-1}$<br>(C) $C_nH_{2n-2}$ (D) $C_nH_{2n+2}$<br>***ಉತ್ತರ :*** (D) $C_nH_{2n+2}$ | 1 |
| 9. | ಒಂದು ಕಬ್ಬಿಣದ ಉಂಗುರಕ್ಕೆ ತಾಮ್ರದ ಲೇಪನ ಮಾಡಬೇಕಾಗಿದೆ. ವಿದ್ಯುಚ್ಛಕ್ತಿಯನ್ನು ಉಪಯೋಗಿಸದೆ ಇದನ್ನು ನಾವು ಹೇಗೆ ಮಾಡಬಹುದು ?<br>***ಉತ್ತರ :***<br>★ ಕಬ್ಬಿಣದ ಉಂಗುರವನ್ನು ತಾಮ್ರದ ಸಲ್ಫೇಟ್ ದ್ರಾವಣದಲ್ಲಿ ಮುಳುಗಿಸಿಡಬೇಕು. ಕಬ್ಬಿಣವು ತಾಮ್ರದ ಸಲ್ಫೇಟ್ ದ್ರಾವಣದಿಂದ ತಾಮ್ರವನ್ನು ಸ್ಥಾನಪಲ್ಲಟಿಸುತ್ತದೆ ಮತ್ತು ತಾಮ್ರವು ಕಬ್ಬಿಣದ ಉಂಗುರದ ಮೇಲೆ ಲೇಪನಗೊಳ್ಳುತ್ತದೆ. ½ + ½ | 1 |
| 12. | ಸೋಡಿಯಂ ಮತ್ತು ಪೊಟಾಶಿಯಂಗಳನ್ನು ಆಧುನಿಕ ಆವರ್ತಕೋಷ್ಟಕದ ಒಂದೇ ಗುಂಪಿನಲ್ಲಿ ಇಡಲಾಗಿದೆ. ಸೋಡಿಯಂ ಸಲ್ಫೇಟ್‌ನ ಅಣುಸೂತ್ರ $Na_2SO_4$ ಆದರೆ ಪೊಟಾಶಿಯಂ ಸಲ್ಫೇಟ್‌ನ ಅಣುಸೂತ್ರವನ್ನು ನಿರ್ಧರಿಸಿ. ನಿಮ್ಮ ನಿರ್ಧಾರಕ್ಕೆ ಕಾರಣ ಕೊಡಿ.<br>***ಉತ್ತರ :***<br>★ ಪೊಟ್ಯಾಸಿಯಂ ಸಲ್ಫೇಟ್‌ನ ಅಣುಸೂತ್ರ $K_2SO_4$. ½<br>★ ಏಕೆಂದರೆ ಸೋಡಿಯಂ ಮತ್ತು ಪೊಟ್ಯಾಸಿಯಂಗಳೆರಡೂ ಒಂದೇ ಸಂಖ್ಯೆಯ ವೇಲೆನ್ಸ್ ಎಲೆಕ್ಟ್ರಾನುಗಳನ್ನು ಹೊಂದಿವೆ. ½ | 1 |
| 15. | $CuO + H_2 \rightarrow Cu + H_2O$<br>ಈ ಕ್ರಿಯೆಯಲ್ಲಿ<br>(i) ಉತ್ಕರ್ಷಿಸಲ್ಪಟ್ಟ<br>(ii) ಅಪಕರ್ಷಿಸಲ್ಪಟ್ಟ<br>ಪ್ರತಿವರ್ತಕಗಳನ್ನು ಹೆಸರಿಸಿ.<br>***ಉತ್ತರ :***<br>i) ಹೈಡ್ರೋಜನ್ / ಜಲಜನಕ / $H_2$ ½<br>ii) ಕಾಪರ್ ಆಕ್ಸೈಡ್ / ತಾಮ್ರದ ಆಕ್ಸೈಡ್ / CuO ½ | 1 |

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|

17. ಒಂದು ಜಮೀನಿಗೆ ಕೃಷಿ ತಜ್ಞರು ನಿರ್ದಿಷ್ಟ ಪ್ರಮಾಣದ ಸುಣ್ಣವನ್ನು ಸೇರಿಸಲು ಸಲಹೆ ನೀಡಿದ್ದಾರೆ. ಇದಕ್ಕೆ ಕಾರಣಗಳೇನಿರಬಹುದು ? ವಿವರಿಸಿ.

***ಉತ್ತರ :***

- ★ ಸಸ್ಯಗಳ ಆರೋಗ್ಯಕರ ಬೆಳವಣಿಗೆಗೆ ನಿರ್ದಿಷ್ಟ pH ವ್ಯಾಪ್ತಿಯ ಅಗತ್ಯವಿದೆ. ½
- ★ ಅವನ ಜಮೀನಿನ ಮಣ್ಣು ಆಮ್ಲೀಯವಾಗಿದೆ. ½
- ★ ಸುಣ್ಣವು ಪ್ರತ್ಯಾಮ್ಲೀಯ ½
- ★ ಆದ್ದರಿಂದ ಮಣ್ಣಿಗೆ ಸುಣ್ಣವನ್ನು ಸೇರಿಸಿದಾಗ ಅದರ ಆಮ್ಲೀಯತೆ ಕಡಿಮೆಯಾಗುತ್ತದೆ / ತಟಸ್ಥಗೊಳ್ಳುತ್ತದೆ. ½

2

19. ನೀರಿನಲ್ಲಿ ಆಮ್ಲೀಯ ದ್ರಾವಣ ವಿದ್ಯುತ್ತನ್ನು ಪ್ರವಹಿಸುತ್ತದೆ ಎಂಬುದನ್ನು ತೋರಿಸುವ ಉಪಕರಣದ ಚಿತ್ರವನ್ನು ಬರೆಯಿರಿ. ಕೆಳಗಿನ ಭಾಗಗಳನ್ನು ಗುರುತಿಸಿ.

(i) ಸಾರರಿಕ್ತ ಹೈಡ್ರೋಕ್ಲೋರಿಕ್ ಆಮ್ಲ

(ii) ರಬ್ಬರ್ ಕಾರ್ಕ್

***ಅಥವಾ***

ಸಾರರಿಕ್ತ ಸಲ್ಫ್ಯೂರಿಕ್ ಆಮ್ಲದೊಂದಿಗೆ ಸತುವಿನ ಚೂರುಗಳ ವರ್ತನೆ ಮತ್ತು ಉರಿಸುವಿಕೆಯ ಮೂಲಕ ಹೈಡ್ರೋಜನ್ ಅನಿಲದ ಪರೀಕ್ಷೆಯನ್ನು ತೋರಿಸುವ ಉಪಕರಣಗಳ ಜೋಡಣೆಯ ಚಿತ್ರವನ್ನು ಬರೆಯಿರಿ. ಕೆಳಗಿನ ಭಾಗಗಳನ್ನು ಗುರುತಿಸಿ.

(i) ಪ್ರನಾಳ

(ii) ಸಾಬೂನಿನ ದ್ರಾವಣ

***ಉತ್ತರ :***




ಚಿತ್ರಕ್ಕೆ 1½

ಭಾಗಕ್ಕೆ ½

2

***ಅಥವಾ***

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|




22. ಕೆಳಗಿನ ಸಂದರ್ಭಗಳಲ್ಲಿ ಲೋಹಗಳ ಯಾವ ಭೌತಗುಣಗಳನ್ನು ಉಪಯೋಗಿಸಲಾಗಿದೆ ?

(i) ಚಿನ್ನವನ್ನು ಆಭರಣಗಳ ತಯಾರಿಕೆಯಲ್ಲಿ ಉಪಯೋಗಿಸುತ್ತಾರೆ.

(ii) ನಿಕ್ಕಲ್ ಅನ್ನು ಗಿಟಾರಿನ ತಂತಿಗಳಲ್ಲಿ ಉಪಯೋಗಿಸುತ್ತಾರೆ.

***ಉತ್ತರ :***

i) ★ ಹೊಳಪಾದ ಮೇಲ್ಮೈ / ಲೋಹೀಯ ಕಾಂತಿ

★ ತನ್ಯತೆ

★ ಕುಟ್ಯತೆ (ಯಾವುದಾದರೂ ಎರಡು ಮಾತ್ರ) ½ + ½

ii) ★ ಶಾಬ್ದನ

★ ತನ್ಯತೆ ½ + ½ 2

26. ಅಲ್ಯುಮಿನಿಯಂ ಸಲ್ಫೇಟ್‌ನೊಂದಿಗೆ ಬೇರಿಯಂ ಕ್ಲೋರೈಡ್ ವರ್ತನೆಯು ಯಾವ ವಿಧದ ರಾಸಾಯನಿಕ ಕ್ರಿಯೆಗೆ ಉದಾಹರಣೆಯಾಗಿದೆ ? ಏಕೆ ? ಈ ಕ್ರಿಯೆಗೆ ಸರಿದೂಗಿಸಿದ ರಾಸಾಯನಿಕ ಸಮೀಕರಣವನ್ನು ಬರೆಯಿರಿ.

***ಉತ್ತರ :***

★ ಇದು ದ್ವಿಸ್ಥಾನಪಲ್ಲಟ ಕ್ರಿಯೆಗೆ ಉದಾಹರಣೆಯಾಗಿದೆ. / ಪ್ರಕ್ಷೇಪನ ಕ್ರಿಯೆಗೆ ಉದಾಹರಣೆಯಾಗಿದೆ. 1

★ ಪ್ರತಿವರ್ತಕಗಳ ನಡುವೆ ಅಯಾನುಗಳ ವಿನಿಮಯ ನಡೆಯುವುದರಿಂದ. / ಬೇರಿಯಂ ಸಲ್ಫೇಟ್‌ನ ಬಿಳಿಯ ಬಣ್ಣದ ಪ್ರಕ್ಷೇಪ ಉಂಟಾಗುತ್ತದೆ. 1

★ $3BaCl_2 + Al_2(SO_4)_3 \rightarrow 3BaSO_4 + 2AlCl_3$. 1 3

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|

28. ಸಂಕಲನ ಮತ್ತು ಆದೇಶನ ಕ್ರಿಯೆಗಳನ್ನು ಉದಾಹರಣೆಗಳ ಸಹಾಯದಿಂದ ವಿವರಿಸಿ. $C_2H_6$ ಆದೇಶನ ಕ್ರಿಯೆಗೆ ಒಳಪಡುತ್ತದೆ, ಆದರೆ ಸಂಕಲನ ಕ್ರಿಯೆಗೆ ಒಳಪಡುವುದಿಲ್ಲ. ಏಕೆ ?

***ಅಥವಾ***

ಸಾಬೂನು ಬಟ್ಟೆಯನ್ನು ಹೇಗೆ ಸ್ವಚ್ಛಗೊಳಿಸುತ್ತದೆ ? ವಿವರಿಸಿ. ಗಡುಸು ನೀರಿನಲ್ಲಿ ಬಟ್ಟೆ ಸ್ವಚ್ಛಗೊಳಿಸಲು ಹೆಚ್ಚು ಪ್ರಮಾಣದ ಸಾಬೂನು ಬೇಕಾಗುತ್ತದೆ. ಏಕೆ ?

***ಉತ್ತರ :***

★ ಅಪರ್ಯಾಪ್ತ ಹೈಡ್ರೋಕಾರ್ಬನ್‌ಗಳು ಕ್ರಿಯಾವರ್ಧಕಗಳ ಸಮ್ಮುಖದಲ್ಲಿ ಹೈಡ್ರೋಜನ್ ಪರಮಾಣುಗಳನ್ನು ಸಂಕಲಿಸಿಕೊಂಡು (ಸೇರಿಸಿಕೊಂಡು) ಪರ್ಯಾಪ್ತ ಹೈಡ್ರೋಕಾರ್ಬನ್‌ಗಳನ್ನು ಉಂಟುಮಾಡುತ್ತವೆ. ½

★ ಉದಾ. : ಎಣ್ಣೆಗಳ ಹೈಡ್ರೋಜನೀಕರಣ (ಜಲಜನಕೀಕರಣ)

ಅಥವಾ ಆಲ್ಕೀನುಗಳು / ಆಲ್ಕೈನುಗಳು ಜಲಜನಕವನ್ನು ಸಂಕಲಿಸಿಕೊಂಡು ಪರ್ಯಾಪ್ತಗೊಳ್ಳುವ ಕ್ರಿಯೆಗಳು.

ಅಥವಾ 

. ½

★ ಸೂರ್ಯನ ಬೆಳಕಿನ ಸಮ್ಮುಖದಲ್ಲಿ ಯಾವುದಾದರೂ ಒಂದು ಕಾರ್ಬನ್ ಸಂಯುಕ್ತಗಳಲ್ಲಿರುವ ಹೈಡ್ರೋಜನ್ ಪರಮಾಣುಗಳನ್ನು ಇತರ ಪರಮಾಣುಗಳಿಂದ ಸ್ಥಾನಪಲ್ಲಟಿಸುವ ಕ್ರಿಯೆ. ½

★ ಉದಾ. : ಸೂರ್ಯನ ಬೆಳಕಿನ ಸಮ್ಮುಖದಲ್ಲಿ ಮಿಥೇನ್‌ನಲ್ಲಿರುವ ಹೈಡ್ರೋಜನ್ ಪರಮಾಣುಗಳು ಕ್ಲೋರಿನ್ ಪರಮಾಣುಗಳಿಂದ ಸ್ಥಾನಪಲ್ಲಟಗೊಳ್ಳುವುದು.

***ಅಥವಾ***

$CH_4 + Cl_2 \rightarrow CH_3Cl + HCl$ ½

★ $C_2H_6$ ಒಂದು ಪರ್ಯಾಪ್ತ ಹೈಡ್ರೋಕಾರ್ಬನ್ / ಕಾರ್ಬನ್–ಕಾರ್ಬನ್ ಪರಮಾಣುಗಳ ನಡುವೆ ಏಕಬಂಧವನ್ನು ಹೊಂದಿದೆ / ಇದು ಅಪರ್ಯಾಪ್ತ ಹೈಡ್ರೋಕಾರ್ಬನ್ ಅಲ್ಲ. ಆದ್ದರಿಂದ ಹೈಡ್ರೋಜನ್ ಪರಮಾಣುಗಳನ್ನು ಸೇರಿಸಲು ಸಾಧ್ಯವಿಲ್ಲ; ಆದರೆ ಸ್ಥಾನಪಲ್ಲಟಿಸಬಹುದು. 1    3

***ಅಥವಾ***

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| | ★ ಸಾಬೂನಿನ ಅಣುಗಳು ಉದ್ದ ಸರಪಣಿಯ ಕಾರ್ಬಾಕ್ಸಿಲಿಕ್ ಆಮ್ಲಗಳ ಸೋಡಿಯಂ ಅಥವಾ ಪೊಟಾಸಿಯಂ ಲವಣಗಳು.<br>★ ಸಾಬೂನಿನ ಅಯಾನಿಕ್ ತುದಿ ನೀರಿನೊಂದಿಗೆ ವರ್ತಿಸಿದರೆ ಕಾರ್ಬನ್ ಸರಪಳಿ ಎಣ್ಣೆಯೊಂದಿಗೆ ವರ್ತಿಸುತ್ತದೆ.<br>★ ಹೀಗೆ ಸಾಬೂನಿನ ಅಣುಗಳು ಮಿಸೆಲ್‌ಗಳೆಂಬ ರಚನೆಗಳನ್ನು ಉಂಟು ಮಾಡುತ್ತದೆ.<br>★ ಸಾಬೂನಿನ ಮಿಸೆಲ್ ನೀರಿನಲ್ಲಿ ಕೊಳೆಯನ್ನು ಕಿತ್ತು ಹೊರ ತೆಗೆಯಲು ಸಹಾಯ ಮಾಡುತ್ತದೆ ಮತ್ತು ನಾವು ನಮ್ಮ ಬಟ್ಟೆಗಳನ್ನು ಸ್ವಚ್ಛವಾಗಿ ತೊಳೆಯಬಹುದು. ½ × 4<br>★ ಗಡಸು ನೀರಿನಲ್ಲಿರುವ ಕ್ಯಾಲ್ಸಿಯಂ ಮತ್ತು ಮೆಗ್ನೀಸಿಯಂ ಲವಣಗಳ ಜೊತೆ ಸಾಬೂನು ವರ್ತಿಸಿ ನೀರಿನಲ್ಲಿ ವಿಲೀನವಾಗದ ಕಲ್ಮಶವನ್ನು (ಕೊಳೆ) ಉಂಟು ಮಾಡುತ್ತದೆ. ಆದ್ದರಿಂದ ಬಟ್ಟೆಯನ್ನು ಗಡಸು ನೀರಿನಲ್ಲಿ ಸ್ವಚ್ಛಗೊಳಿಸಲು ಹೆಚ್ಚಿನ ಪ್ರಮಾಣದ ಸಾಬೂನು ಬೇಕಾಗುತ್ತದೆ. 1 | 3 |
| 33. | ಎರಡು ಧಾತುಗಳ ಪರಮಾಣು ಸಂಖ್ಯೆಗಳು ಕ್ರಮವಾಗಿ 8 ಮತ್ತು 16 ಆಗಿವೆ. ಈ ಎರಡು ಧಾತುಗಳ ಎಲೆಕ್ಟ್ರಾನ್ ವಿನ್ಯಾಸಗಳನ್ನು ಬರೆಯಿರಿ. ಈ ಎರಡು ಧಾತುಗಳನ್ನು ಆಧುನಿಕ ಆವರ್ತಕೋಷ್ಟಕದ ಒಂದೇ ಗುಂಪಿನಲ್ಲಿಡಬಹುದೇ ? ನಿಮ್ಮ ಉತ್ತರವನ್ನು ಸಮರ್ಥಿಸಿ. ಈ ಎರಡು ಧಾತುಗಳಲ್ಲಿ ಯಾವುದು ಹೆಚ್ಚು ವಿದ್ಯುದೃಣೀಯವಾಗಿದೆ ಎಂದು ಕಂಡುಹಿಡಿಯಿರಿ. ನಿಮ್ಮ ಉತ್ತರಕ್ಕೆ ಕಾರಣ ಕೊಡಿ.<br>***ಉತ್ತರ :***<br>★ ಪರಮಾಣು ಸಂಖ್ಯೆ 8 — 2, 6 ½<br>★ ಪರಮಾಣು ಸಂಖ್ಯೆ 16 — 2, 8, 6 ½<br>★ ಹೌದು, ಎರಡೂ ಧಾತುಗಳು ಒಂದೇ ಗುಂಪಿಗೆ ಸೇರಿವೆ. ½<br>★ ಏಕೆಂದರೆ ಅವುಗಳ ಅತ್ಯಂತ ಹೊರಕಕ್ಷೆಯಲ್ಲಿ ಒಂದೇ ಸಂಖ್ಯೆಯ ಎಲೆಕ್ಟ್ರಾನುಗಳನ್ನು ಹೊಂದಿವೆ / ಎರಡರಲ್ಲೂ ಒಂದೇ ಸಂಖ್ಯೆಯ ವೇಲೆನ್ಸ್ ಎಲೆಕ್ಟ್ರಾನುಗಳಿವೆ. ½<br>★ ಪರಮಾಣು ಸಂಖ್ಯೆ 8 ಇರುವ ಧಾತುವು ಪರಮಾಣು ಸಂಖ್ಯೆ 16 ಇರುವ ಧಾತುವಿಗಿಂತ ಹೆಚ್ಚು ವಿದ್ಯುದೃಣೀಯವಾಗಿದೆ. ½<br>★ ಗುಂಪಿನಲ್ಲಿ ಕೆಳಗೆ ಚಲಿಸಿದಂತೆ ವಿದ್ಯುದೃಣೀಯತೆ ಕಡಿಮೆಯಾಗುತ್ತದೆ. ½ | 3 |

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| 35. | ಕಾಸುವಿಕೆ ಮತ್ತು ಹುರಿಯುವಿಕೆಗಳ ನಡುವಿನ ವ್ಯತ್ಯಾಸವನ್ನು ತಿಳಿಸಿ. ಈ ಪ್ರಕ್ರಿಯೆಗಳನ್ನು ಸತುವನ್ನು ಉದ್ಧರಣೆ ಮಾಡುವಲ್ಲಿ ಹೇಗೆ ಉಪಯೋಗಿಸಿಕೊಳ್ಳಲಾಗಿದೆ ? ಸಮೀಕರಣಗಳ ಸಹಾಯದಿಂದ ವಿವರಿಸಿ. ಈ ಕ್ರಿಯೆಗಳ ನಂತರ ಸತುವನ್ನು ಪಡೆಯಲು ಅಪಕರ್ಷಣೆ ಅಗತ್ಯವೇ ? ಏಕೆ ? | |
| | ***ಉತ್ತರ :*** | |
| | ★ ಕಾರ್ಬೋನೇಟ್ ಅದಿರುಗಳನ್ನು ಆಕ್ಸೈಡ್ ಆಗಿ ಪರಿವರ್ತಿಸಬೇಕಾದರೆ <u>ಕಡಿಮೆ ಗಾಳಿ</u>ಯಲ್ಲಿ ಹೆಚ್ಚಿನ ಉಷ್ಣತೆಯಲ್ಲಿ ಕಾಸುವ ಪ್ರಕ್ರಿಯೆಯನ್ನು ಕಾಸುವಿಕೆ ಎನ್ನುವರು. ½ | |
| | ★ ಸಲ್ಫೈಡ್ ಅದಿರನ್ನು ಆಕ್ಸೈಡ್ ಆಗಿ ಪರಿವರ್ತಿಸಲು <u>ಅಧಿಕ ಪ್ರಮಾಣ</u>ದ ಗಾಳಿಯಲ್ಲಿ ಹೆಚ್ಚಿನ ಉಷ್ಣತೆಗೆ ಕಾಸುವ ಪ್ರಕ್ರಿಯೆಯನ್ನು ಹುರಿಯುವಿಕೆ ಎನ್ನುವರು. ½ | |
| | ★ $ZnCO_3$ ಯನ್ನು ಕಾಸುವ ಪ್ರಕ್ರಿಯೆಗೆ ಒಳಪಡಿಸಿದಾಗ ZnO ಉಂಟಾಗುತ್ತದೆ. $ZnCO_3\,(s) \xrightarrow{\text{ಉಷ್ಣ}} ZnO\,(s) + CO_2\,(g)$ 1 | |
| | ★ ZnS ನ್ನು ಹುರಿಯುವಿಕೆಗೆ ಒಳಪಡಿಸಿದಾಗ ZnO ಉಂಟಾಗುತ್ತದೆ. $2\,ZnS\,(s) + 3O_2\,(g) \xrightarrow{\text{ಉಷ್ಣ}} 2\,ZnO\,(s) + 2\,SO_2\,(g)$ 1 | |
| | ★ ಈ ಕ್ರಿಯೆಗಳ ನಂತರ ಅಪಕರ್ಷಣೆ ಅಗತ್ಯವಿದೆ. ½ | |
| | ★ ಏಕೆಂದರೆ ಸತುವಿನ ಆಕ್ಸೈಡನ್ನು ಸೂಕ್ತ ಅಪಕರ್ಷಣಕಾರಿಯಿಂದ ಅಪಕರ್ಷಿಸಿದಾಗ ಸತು ಲೋಹ ಉಂಟಾಗುತ್ತದೆ. ½ | 4 |